ಅಬಕಾರಿ ಗುತ್ತಿಗೆಯಿಂದ ಬಂದ ಆದಾಯ.

1667. ಶ್ರೀ ಕೆ. ಪ್ರತಾಪ ಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಗೃಹ ಮತ್ತು ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಸರ್ಕಾರಕ್ಕೆ ಅಬಕಾರಿ ಗುತ್ತಿಗೆಯಿಂದ 1989-90 ಮತ್ತು 1990-91ನೇ ಸಾಲುಗಳಲ್ಲಿ ಬಂದ ಆದಾಯವೆಷ್ಟು? (ವರ್ಷವಾರು ವಿವರ ನೀಡುವುದು)

ಶ್ರೀ ಧರ್ಮ ಸಿಂಗ್ (ಗೃಹ ಮತ್ತು ಅಬಕಾರಿ ಸಚಿವರು) :

ಅ) ವರ್ಷ	ಸರ್ಕಾರಕ್ಕೆ ಬಂದ ಆದಾಯ
1989-90	208.72 ಕೋಟಿ ರೂ.ಗಳು
1990-91	278.84 ಕೋಟಿ ರೂ.ಗಳು
ಒಟ್ಟು	487.56 ಕೋಟಿ ರೂ.ಗಳು

ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಕಾರ್ಯ ಕುರಿತು

1716. ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಯೋಜನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಜನವರಿ 1991 ರಿಂದ ಡಿಸೆಂಬರ್ 1991ರ ಅಂತ್ಯದ ವರೆಗೆ ತೆಗೆದುಕೊಂಡ ಕಾರ್ಯಕ್ರಮಗಳ ವಿವರಗಳನ್ನು ಕೊಡುವುದು (ತಾಲ್ಲೂಕ್‌ವಾರು ವಿವರಗಳನ್ನು ಒದಗಿಸುವುದು).

ಆ) ಈ ಅವಧಿಯಲ್ಲಿ ಖರ್ಚು ಮಾಡಿದ ಹಣವೆಷ್ಟು? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

ಇ) 1992-93ನೇ ಸಾಲಿಗೆ ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯಲ್ಲಿ ತೆಗೆದುಕೊಳ್ಳಲು ಉದ್ದೇಶಿಸಿದ ಕಾರ್ಯಕ್ರಮಗಳಾವುವು?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಯೋಜನಾ, ಸಾಂಖ್ಯಿಕ ಹಣಕಾಸು ಮತ್ತು ಸಾಂಖ್ಯಿಕ ಸಚಿವರು) :

ಅ) ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಯೋಜನೆಯಡಿಯಲ್ಲಿ ವಲಯವಾರು ತೆಗೆದುಕೊಂಡ ಕಾಮಗಾರಿಗಳ ಸಂಖ್ಯೆ ಮತ್ತು 1-1-1991 ರಿಂದ 12-12-1991 ರವರೆಗೆ ಖರ್ಚು ಮಾಡಿದ ಹಣದ ವಿವರಗಳು ಕೆಳಗಿನಂತಿವೆ. ತಾಲ್ಲೂಕ್‌ವಾರು ವಿವರಗಳು ತತ್‌ಕ್ಷಣ ಲಭ್ಯವಿರುವುದಿಲ್ಲ.